# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** M/s Siemens Gamesa Renewable Power Private Limited ಕಂಪನಿಯವರಿಗೆ ಕೊಪ್ಪಳ ಜಿಲ್ಲೆ, ಯಲಬುರ್ಗಾ ಮತ್ತು ಕುಷ್ಟಗಿ ತಾಲ್ಲೂಕುಗಳ ವಿವಿಧ ಗ್ರಾಮಗಳಲ್ಲಿ ಹಂಚಿಕೆಯಾಗಿರುವ 20 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು M/s Renew Surya Ojas Private Limited ರವರಿಗೆ ವರ್ಗಾಯಿಸಿ, ಸದರಿ ಸಾಮರ್ಥ್ಯವನ್ನು 228.69 ಮೆ.ವ್ಯಾ ಸಾಮರ್ಥ್ಯಕ್ಕೆ ಹೆಚ್ಚಿಸಿ, ಸದರಿ ಯೋಜನೆಯನ್ನು ಅನುಷ್ಠಾನಗೊಳಿಸಲು ಕಾಲಾವಧಿ ವಿಸ್ತರಿಸುವ ಕುರಿತು.

ಸಂ. 1479
ದಿನಾಂಕ 8/9/21

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಇಎನ್ 103 ಎನ್‌ಸಿಇ 2016, ದಿನಾಂಕ:22.07.2016
2. ಸರ್ಕಾರದ ಆದೇಶ ಸಂಖ್ಯೆ:ಇಎನ್ 97 ಎನ್‌ಸಿಇ 2018, ದಿನಾಂಕ:28.02.2018
3. ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್. ಇವರ ಪತ್ರ ಸಂಖ್ಯೆ:KREDL/ 08/RSOPL-228.69 MW (SGRPPL-20MW)/Tondehal/F-31(2021)/2103, ದಿನಾಂಕ: 14.07.2021

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆದೇಶದನ್ವಯ M/s Gamesa Renewable Private Limited ರವರಿಗೆ ಬಾಗಲಕೋಟೆ ಮತ್ತು ಕೊಪ್ಪಳ ಜಿಲ್ಲೆಗಳ, ಹುನಗುಂದ ಮತ್ತು ಕುಷ್ಠಗಿ ತಾಲ್ಲೂಕುಗಳ ಹುನಗುಂದ, ತಿಮ್ಮಾಪುರ್, ಅಮರಾವತಿ, ವಿತ್ತವಡಗಿ, ಹುಚ್ಚನೂರ್, ನಾಗೂರ್, ಎಡಹಳ್ಳಿ, ವೀರಾಪುರ್, ಬನ್ನಿಹಟ್ಟಿ, ಚಿಕ್ಕಬಡವಡಗಿ ಮತ್ತು ಹಿರೇಬಡವಡಗಿ ಗ್ರಾಮಗಳಲ್ಲಿ 20 ಮೆ.ವ್ಯಾ. ಸಾಮರ್ಥ್ಯದ ಯೋಜನೆ ಹಾಗೂ ಕೊಪ್ಪಳ ಜಿಲ್ಲೆ, ಯಲಬುರ್ಗಾ ಮತ್ತು ಕುಷ್ಟಗಿ ತಾಲ್ಲೂಕುಗಳ ತೊಂಡೆಹಾಲ್, ಬಂಡೇಹಾಲ್, ಸಂಗನಾಲ್, ಅದೂರ್, ರಾಜೂರ್ ಮತ್ತು ದ್ಯಾಮಾಪುರ ಗ್ರಾಮಗಳಲ್ಲಿ 20 ಮೆ.ವ್ಯಾ. ಸಾಮರ್ಥ್ಯದ ಯೋಜನೆ ಸೇರಿ ಒಟ್ಟು 40 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಿ ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಆದೇಶದನ್ವಯ M/s Gamesa Renewable Private Limited ಕೊಪ್ಪಳ ಜಿಲ್ಲೆ, ಯಲಬುರ್ಗಾ ಮತ್ತು ಕುಷ್ಟಗಿ ತಾಲ್ಲೂಕುಗಳ ವಿವಿಧ ಗ್ರಾಮಗಳಲ್ಲಿ ಹಂಚಿಕೆಯಾಗಿದ್ದ 20 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಹೆಸರನ್ನು M/s Siemens Gamesa Renewable Power Private Limited ಎಂದು ಬದಲಾಯಿಸಿ ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್.ರವರು ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆಯಲ್ಲಿ ಮೇಲಿನ ಆದೇಶದನ್ವಯ M/s Siemens Gamesa Renewable Power Private Limited ಕಂಪನಿಗೆ ಕೊಪ್ಪಳ ಜಿಲ್ಲೆ, ಯಲಬುರ್ಗಾ ಮತ್ತು ಕುಷ್ಟಗಿ ತಾಲ್ಲೂಕುಗಳ ವಿವಿಧ ಗ್ರಾಮಗಳಲ್ಲಿ ಹಂಚಿಕೆಯಾಗಿರುವ 20 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು M/s Renew Surya Ojas Private Limited ಕಂಪನಿಯವರಿಗೆ ವರ್ಗಾವಣೆ ಮಾಡಿ, ಸದರಿ ಸಾಮರ್ಥ್ಯವನ್ನು 228.69 ಮೆ.ವ್ಯಾ ಸಾಮರ್ಥ್ಯಕ್ಕೆ ಹೆಚ್ಚಿಸುವಂತೆ M/s Renew Surya Ojas Private Limited ಇವರು ಕೆ.ಆರ್.ಇ.ಡಿ.ಎಲ್.ನ್ನು ಕೋರಿರುವುದಾಗಿ, ಸದರಿ ವರ್ಗಾವಣೆಗೆ ಎರಡು ಕಂಪನಿಯವರು ಸಹಮತಿ ನೀಡಿರುವುದಾಗಿ ಹಾಗೂ ಸದರಿ ವರ್ಗಾವಣೆ ಪ್ರಸ್ತಾವನೆಗೆ ಅನ್ವಯವಾಗುವ ನಿಗದಿತ ಶುಲ್ಕಗಳನ್ನು ಪಾವತಿಸಿಕೊಂಡಿರುವುದಾಗಿ ಕ್ರೆಡಲ್ ರವರು ತಿಳಿಸಿರುತ್ತಾರೆ.

ಮುಂದುವರೆದು, ಸದರಿ ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್ತಿಗೆ ಸಂಬಂಧಿಸಿದಂತೆ ಮೂಲ ಆದೇಶದಲ್ಲಿ ನಮೂದಿಸಿರುವ ಸ್ವಂತ ಬಳಕೆ / ಮೂರನೇ ವ್ಯಕ್ತಿಗೆ ರಾಜ್ಯ ವಿದ್ಯುತ್ ಪ್ರಸರಣ ಜಾಲದ ಮುಖಾಂತರ ಮಾರಾಟ ಮಾಡುವ ಬದಲಾಗಿ, ಕೇಂದ್ರ ಸರ್ಕಾರದ Power Grid Corporation of India Limited (PGCIL) ವಿದ್ಯುತ್ ಪ್ರಸರಣ ಜಾಲಕ್ಕೆ ಜೋಡಿಸಿ, ಹೊರ ರಾಜ್ಯಗಳಿಗೆ ಬಿಡ್ಡಿಂಗ್/ಮೂರನೇ ವ್ಯಕ್ತಿಗೆ Inter State Transmission System (ISTS) ವರ್ಗದ ಮುಖಾಂತರ ವಿದ್ಯುತ್ ಸರಬರಾಜು ಮಾಡುವ ಷರತ್ತಿನೊಂದಿಗೆ M/s Siemens Gamesa Renewable Power Private Limited ಕಂಪನಿಗೆ ಕೊಪ್ಪಳ ಜಿಲ್ಲೆ, ಯಲಬುರ್ಗಾ ಮತ್ತು ಕುಷ್ಟಗಿ ತಾಲ್ಲೂಕುಗಳ ವಿವಿಧ ಗ್ರಾಮಗಳಲ್ಲಿ

MD KREDL

GM (Tech) KREDL

ATO

Wind Section 1376 14/9/21

ಹಂಚಿಕೆಯಾಗಿರುವ 20 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು M/s Renew Surya Ojas Private Limited ಕಂಪನಿಯವರಿಗೆ ವರ್ಗಾವಣೆ ಮಾಡಿ, ಸದರಿ ಸಾಮರ್ಥ್ಯವನ್ನು 228.69 ಮೆ.ವ್ಯಾ.ಗೆ ಹೆಚ್ಚಿಸುವ ಹಾಗೂ ಸದರಿ ಯೋಜನೆಯನ್ನು ಅನುಷ್ಠಾನಗೊಳಿಸಲು ದಿನಾಂಕ:22.07.2022ರಿಂದ 21.07.2024ರವರೆಗೆ ಎರಡು ವರ್ಷಗಳ ಕಾಲಾವಧಿಯನ್ನು ವಿಸ್ತರಿಸುವ ಹಾಗೂ ಸದರಿ ಕಂಪನಿಯವರು ಪ್ರತಿ ವಿಂಡ್ ಟರ್ಬೈನ್‌ಗೆ 4 ಎಕರೆಯಂತೆ ಒಟ್ಟು 228.69 ಮೆ.ವ್ಯಾ. ಸಾಮರ್ಥ್ಯವನ್ನು 264 ಎಕರೆ ಖಾಸಗಿ ಜಮೀನಿನಲ್ಲಿ ಅನುಷ್ಠಾನಗೊಳಿಸಬಹುದೆಂಬ ಅಭಿಪ್ರಾಯದೊಂದಿಗೆ ಸದರಿ ಯೋಜನೆಯ ಚೆಕ್‌ಲಿಸ್ಟ್‌ನೊಂದಿಗೆ ಶಿಫಾರಸ್ಸು ಮಾಡಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಸರ್ಕಾರದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಎನರ್ಜಿ 194 ಎನ್ ಸಿಇ 2021**
**ಬೆಂಗಳೂರು ದಿನಾಂಕ:03.09.2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, M/s Siemens Gamesa Renewable Power Private Limited ಕಂಪನಿಯವರಿಗೆ ಕೊಪ್ಪಳ ಜಿಲ್ಲೆ, ಯಲಬುರ್ಗಾ ಮತ್ತು ಕುಷ್ಟಗಿ ತಾಲ್ಲೂಕುಗಳ ವಿವಿಧ ಗ್ರಾಮಗಳಲ್ಲಿ ಹಂಚಿಕೆಯಾಗಿರುವ 20 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು M/s Renew Surya Ojas Private Limited ಕಂಪನಿಯವರಿಗೆ ವರ್ಗಾಯಿಸಿ, ಸದರಿ ಸಾಮರ್ಥ್ಯವನ್ನು 228.69 ಮೆ.ವ್ಯಾಗೆ ಹೆಚ್ಚಿಸಿ, ಸದರಿ ಯೋಜನೆಯನ್ನು ಅನುಷ್ಠಾನಗೊಳಿಸಲು ದಿನಾಂಕ:22.07.2022ರಿಂದ 21.07.2024ರವರೆಗೆ ಎರಡು ವರ್ಷಗಳ ಕಾಲಾವಧಿಯನ್ನು ವಿಸ್ತರಿಸಿ ಈ ಕೆಳಕಂಡ ಶೆಡ್ಯೂಲ್ ಹಾಗೂ ಷರತ್ತಿಗೊಳಪಟ್ಟು ಆದೇಶಿಸಿದೆ.

**Geographical area description for 228.69 MW capacity wind power project of M/s. Renew Surya Ojas Private limited**

| Sl. No | Geographical area description of the project | Near by villages of the proposed area & District | Existing (Transfer) capacity in MW | Capacity on enhance ment in MW | Total capacity in MW |
|---|---|---|---|---|---|
| 1 | It is ground level plain, spreads around Bandehal and Tondehal. It appears to be agricultural land and has scattered plantation and moderate elevation varying from 620 to 640 m. The identified area is surrounded by points A, B, C, D and are held in the following Geographical co-ordinates as:<br><br>**Point A:** Lat:15°30'0''N, Long: 75°51'45''E<br>**Point B**: Lat: 15°35'0''N, Long: 75°51'39.24''E<br>**Point C**: Lat: 15°35'0''N, Long: 75°57'32.4''E<br>**Point D:** Lat: 15°30'0''N, Long: 75°57'36.36''E<br><br>**Peaks**: 637,615,617,622,628,609,619,629,623,614 & 625m AMSL.<br><br>**Toposheet No:** 48 M/14<br><br>**Tentative WTG Co-ordinates for 66 Nos WTGs at Tondihal site**<br>**WTG No** \| **LONGITUDE** \| **LATITUDE** | Tondehal, Bandehal, Sangnal, Adur, Rajur & Dymapur Villages of Yelaburga & kustagi Taluks, Koppal District. | 20 MW | 208.69 MW | 228.69 MW (66 Nos x 3465 K[illegible]) |